## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 823(810)

ಸದಸ್ಯರ ಹೆಸರು : ಡಾ|| ಶ್ರೀ ಯತೀಂದ್ರ ಎಸ್.
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 19.08.2025

ಉತ್ತರಿಸುವವರು : ಪೌರಾಡಳಿತ ಮತ್ತು ಹಜ್ ಸಚಿವರು

********

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರವು ರಾಜ್ಯದ ಇತರೆ ಜಿಲ್ಲಾ/ತಾಲ್ಲೂಕು ವ್ಯಾಪ್ತಿಯ ಮಹಾನಗರಪಾಲಿಕೆ/ನಗರಸಭೆ/ಪಟ್ಟಣ ಪಂಚಾಯತಿ ವ್ಯಾಪ್ತಿಯ ಕಂದಾಯ ನಿವೇಶನಗಳಿಗೆ ಮತ್ತು ಕಂದಾಯ ನಿವೇಶನಗಳಲ್ಲಿ ನಿರ್ಮಿಸಿರುವ ಮನೆಗಳಿಗೆ ಬಿ-ಖಾತಾ ಮಾಡಿಕೊಡುವ ಮೂಲಕ ಲಕ್ಷಾಂತರ ಕುಟುಂಬದ ನೆರವಿಗೆ ನಿಂತಿರುವುದು ನಿಜವೇ: | ಹೌದು |
| ಆ | ಈ ರೀತಿ ಖಾತಾ ಮಾಡಿದ ನಿವೇಶಗಳಲ್ಲಿ ಮನೆಗಳನ್ನು ನಿರ್ಮಿಸಲು ನಕ್ಷೆ ಮಂಜೂರು ಮಾಡಲು ಕೋರಿರುವ ಪ್ರಕರಣಗಳಲ್ಲಿ ಬೆಂಗಳೂರು ವ್ಯಾಪ್ತಿಯಲ್ಲಿ ಮಾತ್ರ ನಕ್ಷೆಗೆ ಅನುಮೋದನೆ ನೀಡುತ್ತಿದ್ದು, ರಾಜ್ಯದ ಇತರೆ ಜಿಲ್ಲೆ/ತಾಲ್ಲೂಕು ವ್ಯಾಪ್ತಿಯಲ್ಲಿ ಸಹ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ ಸೂಕ್ತ ಆದೇಶ ಹೊರಡಿಸಲು ಸರ್ಕಾರದ ನಿಲುವೇನು? (ವಿವರ ನೀಡುವುದು) | ನಗರ ಸ್ಥಳೀಯ ಸಂಸ್ಥೆಗಳು ಕಟ್ಟಡ ಪರವಾನಿಗೆ ನೀಡುವ ಪೂರ್ವದಲ್ಲಿ ತಾಂತ್ರಿಕ ಅಭಿಪ್ರಾಯವನ್ನು ಸಂಬಂಧಿಸಿದ ಯೋಜನಾ ಪ್ರಾಧಿಕಾರಗಳಿಂದ ಪಡೆಯಬೇಕಾಗಿರುತ್ತದೆ. ತಾಂತ್ರಿಕ ಅಭಿಪ್ರಾಯ ನೀಡಲಾದ ಪ್ರಕರಣಗಳಲ್ಲಿ ಕಟ್ಟಡ ಪರವಾನಿಗೆ ನೀಡಲಾಗುತ್ತಿದೆ. ಬಿ-ಖಾತೆಗಳಿಗೆ ತಾಂತ್ರಿಕ ಅಭಿಪ್ರಾಯ ದೊರೆಯದ ಕಾರಣ ಕಟ್ಟಡ ಪರವಾನಿಗೆ ನೀಡುತ್ತಿಲ್ಲ. |

ಇ-ಸಂಖ್ಯೆ: ನಅಇ 207 ಜಿಇಎಲ್ 2025

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು